**ಹಿರಿಯ ಸಿವಿಲ್ ನ್ಯಾಯಾಧೀಶರು ಮತ್ತು ಪ್ರಥಮ ದರ್ಜೆ ನ್ಯಾಯಿಕ ದಂಡಾಧಿಕಾರಿಗಳು,**
**ಕೆ.ಆರ್.ನಗರ**

**ಸಿ.ಸಿ.ಸಂಖ್ಯೆ: 218/2025**

**ಪಿರ್ಯಾದುದಾರರು:** ಶ್ರೀ ಮಂಜೇಗೌಡ ಕೆ.ಪಿ.

**--ವಿರುದ್ಧ --**

**ಆರೋಪಿ:** ಶ್ರೀಮತಿ ಕಸ್ರ ಬಾನು ಎಸ್.ಎ.

**ಆ ಪಾ ದ ನೆ**

ಆರೋಪಿತರಾದ ನೀವು ಪಿರ್ಯಾದುದಾರರಿಗೆ ಕಾನೂನುಬದ್ಧವಾಗಿ ಪಾವತಿ ಮಾಡಬೇಕಾದ ರೂ.3,00,000/- ಗಳ ಮರುಪಾವತಿಗಾಗಿ ಉಜ್ಜೀವನ್ ಸ್ಮಾಲ್ ಫೈನಾನ್ಸ್ ಬ್ಯಾಂಕ್, ಕೆ.ಆರ್.ನಗರ ಶಾಖೆಯ ಚೆಕ್ ನಂ: 435449, ದಿನಾಂಕ: 24.04.2025 ರೂ.3,00,000/- ಎಂದು ನಮೂದಿಸಿ ಚೆಕ್ಕನ್ನು ನೀಡಿದ್ದು, ಸದರಿ ಚೆಕ್ಕನ್ನು ಪಿರ್ಯಾದುದಾರರು ತಮ್ಮ ಖಾತೆಯನ್ನು ಹೊಂದಿರುವ ಇಕ್ವಾಟಸ್ ಸ್ಮಾಲ್ ಫೈನಾನ್ಸ್ ಬ್ಯಾಂಕ್, ಕೆ.ಆರ್.ನಗರ ಶಾಖೆ ಇಲ್ಲಿ ನಗದೀಕರಿಸಲು ಹಾಜರುಪಡಿಸಿದಾಗ, ಸದರಿಯವರು ನಿಮ್ಮ ಖಾತೆಯಲ್ಲಿ "**Funds Insufficient**" ಎಂಬ ಹಿಂಬರಹದೊಂದಿಗೆ ಚೆಕ್ಕು ಅಮಾನ್ಯಗೊಂಡಿದ್ದು, ಆ ಬಗ್ಗೆ ಸದರಿ ಬ್ಯಾಂಕಿನವರು ದಿನಾಂಕ 28.04.2025 ರಂದು ಹಿಂಬರಹವನ್ನು ನೀಡಿದ್ದು, ನಂತರ ಪಿರ್ಯಾದುದಾರರು ತಮ್ಮ ವಕೀಲರ ಮುಖಾಂತರ ದಿನಾಂಕ: 06.05.2025 ರಂದು ಬರವಣಿಗೆ ರೂಪದಲ್ಲಿ ತಿಳುವಳಿಕೆ ಪತ್ರವನ್ನು ಕಳುಹಿಸಿದ್ದರೂ ಸಹ ಚೆಕ್ಕಿನಲ್ಲಿರುವ ಹಣವನ್ನು ಮರುಪಾವತಿ ಮಾಡಿರುವುದಿಲ್ಲ, ಆ ಕಾರಣ ನೀವು ವರ್ಗಾವಣೀಯ ಲಿಖಿತಗಳ ಅಧಿನಿಯಮ ಕಲಂ 138 ರಡಿಯಲ್ಲಿ ಶಿಕ್ಷಾರ್ಹವಾದ ಅಪರಾಧ ಈ ನ್ಯಾಯಾಲಯದ ಸಂಜ್ಞಾನದಲ್ಲಿ ಎಸಗಿದ್ದೀರೆಂದು ಆಪಾದಿಸಲಾಗಿದೆ.

ಪ್ರಶ್ನೆಃ- 1 ಈಗ ಓದಿ ಹೇಳಿದ ಆಪಾದನೆ ನಿಮಗೆ ತಿಳಿಯಿತೆ?

ಉತ್ತರಃ

ಪ್ರಶ್ನೆ-2 ಮೇಲ್ಕಂಡ ಆಪಾದನೆಯನ್ನು ಒಪ್ಪಿಕೊಳ್ಳುವಿರೋ ಅಥವಾ ವಿಚಾರಣೆ ಆಗಬೇಕೆ?

ಉತ್ತರಃ

*(ದಿನಾಂಕ **18.09.2025** ರಂದು ತೆರೆದ ನ್ಯಾಯಾಲಯದಲ್ಲಿ ಆರೋಪಿಗೆ ತಿಳಿಯುವ ಭಾಷೆಯಲ್ಲಿ ಆರೋಪವನ್ನು ಓದಿ, ತಿಳಿಸಿ ಹೇಳಿ, ಕೇಳಿ ಉತ್ತರವನ್ನು ಪಡೆಯಲಾಗಿದೆ ಎಂದು ಈ ಮೂಲಕ ಧೃಡೀಕರಿಸಿದೆ)*

ಹಿರಿಯ ಸಿವಿಲ್ ನ್ಯಾಯಾಧೀಶರು
ಮತ್ತು ಪ್ರ.ದ.ನ್ಯಾದಂ. ಕೆ ಆರ್ ನಗರ.

Aravindra B C

Digitally signed by Aravindra B C
Date: 2025.09.20 15:49:44 +0530